**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE/ADMI0/EST(8)/2/2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ: 22-03-2021

# ಹಿಂಬರಹ

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 15 ಸೇಇವಿ 2021 ಬೆಂಗಳೂರು ದಿ:05-03-2021 ರ ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.

1. ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ. (ಇಲಾಖಾ ವೆಬ್‌ಸೈಟ್ ಮುಖಾಂತರ).
2. ಆಯುಕ್ತಾಲಯದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ, ಜಂಟಿ ನಿರ್ದೇಶಕರು (ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಮತ್ತು ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಆಯುಕ್ತರ ಅಪ್ತಶಾಖೆಗೆ.
4. ನಿರ್ದೇಶಕರ ಅಪ್ತಶಾಖೆಗೆ
5. ಆಯುಕ್ತಾಲಯದ ಡಿಇಕ್ಯೂ (1) & (2) ಮತ್ತು ಇಎಸ್‌ಟಿ ಯ ಎಲ್ಲಾ ವಿಭಾಗಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ಆಯುಕ್ತಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಆಡಳಿತಾಧಿಕಾರಿ**
**ತಾಂತ್ರಿಕ ಶಿಕ್ಷಣ ಇಲಾಖೆ**

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 15 ಸೇಇವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:05.03.2021.

**ಸುತ್ತೋಲೆ**

ಸಂ..1194.. 20/3/2

ವಿಷಯ: ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧದ ಅನಾಮಧೇಯ (anonymous) ದೂರುಗಳ ಬಗ್ಗೆ.

ಉಲ್ಲೇಖ:
1. ಸುತ್ತೋಲೆ ಸಂಖ್ಯೆ: ಸಿಆಸುಇ 21 ಸೇಇವಿ 2019, ದಿನಾಂಕ:03.10.2019.
2. ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ: ಇ - 2306163/2021, ದಿನಾಂಕ:20.02.2021

*****

ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ದೂರುಗಳು ಕೆಲವು ಸಂದರ್ಭಗಳಲ್ಲಿ ವೈಯಕ್ತಿಕ ದ್ವೇಷ, ಅಸೂಯೆ ಅಥವಾ ಪೂರ್ವಗ್ರಹ ಪೀಡಿತವಾಗಿದ್ದು, ಪೂರಕ ಮಾಹಿತಿ/ದಾಖಲೆಗಳನ್ನು ಲಭ್ಯಪಡಿಸದಿರುವುದರಿಂದ ಹಾಗೂ ಇಂತಹ ದೂರುಗಳಿಂದಾಗಿ ಸರ್ಕಾರಿ ಅಧಿಕಾರಿ/ನೌಕರರು ದೈನಂದಿನ ಕೆಲಸ ಕಾರ್ಯಗಳನ್ನು ಮುಕ್ತ ಹಾಗೂ ನಿರ್ಭೀತರಾಗಿ ಕೆಲಸ ನಿರ್ವಹಿಸಲು ತೊಂದರೆಯಾಗುತ್ತಿರುವುದನ್ನು ಗಮನಿಸಿ, ಇಂತಹ ಅನಾಮಧೇಯ ಅರ್ಜಿಗಳನ್ನು ತನಿಖೆಗೆ/ವಿಚಾರಣೆಗೆ ಒಳಪಡಿಸದೇ ಕಡತಗೊಳಿಸುವಂತೆ ಹಾಗೂ ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ/ವಿಚಾರಣೆಗೆ ಪರಿಗಣಿಸುವಂತೆ ಉಲ್ಲೇಖ (1) ರ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ.

ಮೇಲ್ಕಂಡ ಸುತ್ತೋಲೆಯಲ್ಲಿನ ಸೂಚನೆಯನ್ನು ದುರುಪಯೋಗಪಡಿಸಿಕೊಂಡು ಅನೇಕರು ನಕಲಿ ಹೆಸರು ಮತ್ತು ನಕಲಿ ವಿಳಾಸವನ್ನು ಬಳಸಿಕೊಂಡು ರಾಜ್ಯ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ದೂರುಗಳನ್ನು ನೀಡಿ ನೌಕರರನ್ನು ಅನಗತ್ಯವಾಗಿ ತನಿಖೆಗೆ ಒಳಪಡಿಸುವಂತೆ ಮಾಡುತ್ತಿರುವುದನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ತಂದಿರುತ್ತದೆ. ಇಂತಹ ಪ್ರಸಂಗಗಳನ್ನು ತಡೆಹಿಡಿಯಲು ಅಗತ್ಯ ಸೂಚನೆಗಳನ್ನು ಹೊರಡಿಸುವಂತೆ ಮಾನ್ಯ ಮುಖ್ಯಮಂತ್ರಿಯವರು ಉಲ್ಲೇಖ (2)ರ ಟಿಪ್ಪಣಿಯಲ್ಲಿ ಆದೇಶಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಪೂರ್ಣ ವಿಳಾಸ ಸಹಿತವಿರುವ ದೂರುಗಳು ಸ್ವೀಕೃತವಾದಾಗ, ದೂರು ನೀಡಿರುವ ವ್ಯಕ್ತಿಯ ಹೆಸರು ಮತ್ತು ವಿಳಾಸವನ್ನು ಖಚಿತಪಡಿಸಿಕೊಂಡು ಅರ್ಜಿದಾರ/ದೂರುದಾರ ಅಗತ್ಯ ಪೂರಕ ದಾಖಲೆಗಳನ್ನು ಒದಗಿಸಿದ ನಂತರ ದೂರುದಾರರ ಆರೋಪವು ಮೇಲ್ನೋಟಕ್ಕೆ ಕಂಡುಬಂದಲ್ಲಿ ಅಂತಹ ದೂರು ಅರ್ಜಿಗಳಿಗೆ ಸಂಬಂಧಿಸಿದಂತೆ ಮಾತ್ರ ಪ್ರಾಥಮಿಕ ತನಿಖೆಗೆ/ವಿಚಾರಣೆಗೆ ಪರಿಗಣಿಸಲು ಆದೇಶಿಸುವಂತೆ ಸೂಚಿಸಲಾಗಿದೆ.

ಈ ಸೂಚನೆಗಳನ್ನು ಸಚಿವಾಲಯದ ಎಲ್ಲಾ ಇಲಾಖಾ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರು ತಮ್ಮ ವ್ಯಾಪ್ತಿಯಲ್ಲಿ ಒಳಪಡುವ ಅಧೀನ ಕಛೇರಿಗಳಿಗೆ ತಿಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

2422923/2021

(ಪಿ. ರವಿಕುಮಾರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ:

ಸಂಕಲನಕಾರರು, ಕರ್ನಾಟಕ ಇ-ರಾಜ್ಯಪತ್ರ

EST-07

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ
ಅಪ್ತ ಶಾಖೆ.
ಸಂಖ್ಯೆ 1871
ದಿನಾಂಕ 19/03/2021

**ಪ್ರತಿಯನ್ನು:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ. ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು,
4. ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110011.
8. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
9. ಎಲ್ಲಾ ಇಲಾಖಾ ಮುಖ್ಯಸ್ಥರು.
10. * ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ /ವಿಧಾನ ಪರಿಷತ್ತು, ಬೆಂಗಳೂರು.
11. *ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು,
12. *ನಿಬಂಧಕರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6ನೇ ಮತ್ತು 7ನೇ ಮಹಡಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009
14. ಎಲ್ಲಾ ಪ್ರಾದೇಶಿಕ ಆಯುಕ್ತರು.
15. ಎಲ್ಲಾ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
16. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
18. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು